ಕರ್ನಾಟಕ ವಿಧಾನ ಸಭೆ. ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 07/03/2020

# ಮಹಾ ಕೃಷಿ ಸಾಲಮನ್ನಾ

**ಮುಂಬೈ:** ಮಹಾರಾಷ್ಟ್ರ ಮುಖ್ಯಮಂತ್ರಿ ಉದ್ಧವ್ ಠಾಕ್ರೆ ಶುಕ್ರವಾರ ಚೊಚ್ಚಲ ಬಜೆಟ್ ಮಂಡನೆ ಮಾಡಿದ್ದು, ರೈತರು ಮತ್ತು ಉದ್ಯೋಗಿಗಳಿಗೆ ಬಂಪರ್ ಕೊಡುಗೆ ನೀಡಿದ್ದಾರೆ. ಹಣಕಾಸು ಸಚಿವ ಅಜಿತ್ ಪವಾರ್ ಬಜೆಟ್ ಮಂಡಿಸಿದ್ದು, ರೈತರ 2 ಲಕ್ಷ ರೂಪಾಯಿವರೆಗಿನ ಸಾಲಮನ್ನಾ ಘೋಷಿಸಲಾಗಿದೆ. 2019ರ



ಸೆಪ್ಟೆಂಬರ್‌ಗೂ ಮೊದಲು ಸಾಲ ಪಡೆದ ರೈತರಿಗೆ ಇದು ಅನ್ವಯವಾಗಲಿದೆ. ಸ್ಥಳೀಯರಿಗೆ ಶೇ.80 ಉದ್ಯೋಗವಕಾಶಗಳ ಭರವಸೆ ನೀಡಲಾಗಿದ್ದು, ಇದಕ್ಕಾಗಿ ಕಾನೂನು ರಚಿಸುವುದಾಗಿ ತಿಳಿಸಿದ್ದಾರೆ. ಸುಂಕ ಹೇರಿಕೆ ಪರಿಣಾಮ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯಲ್ಲಿ 1 ರೂ. ಏರಿಕೆಯಾಗಲಿದೆ. 10ನೇ ತರಗತಿ ಉತ್ತೀರ್ಣರಾದ ಯುವಕ-ಯುವತಿಯರಿಗೆ ಉದ್ಯೋಗ ತರಬೇತಿ ನೀಡಿ, ಅವರಿಗಾಗಿ ಮುಂದಿನ ಐದು ವರ್ಷಗಳಲ್ಲಿ ಸುಮಾರು 5 ಲಕ್ಷ ಉದ್ಯೋಗ ಸೃಷ್ಟಿಸುವ ಗುರಿ ಹೊಂದಲಾಗಿದೆ. ಶಿಕ್ಷಣ ಕ್ಷೇತ್ರಕ್ಕಾಗಿ 6 ಸಾವಿರ ಕೋಟಿ ರೂ. ಮೀಸಲಿಡಲಾಗಿದ್ದು, ಸಾರಿಗೆ ಕ್ಷೇತ್ರ ಅಭಿವೃದ್ಧಿಗಾಗಿ ಹೊಸದಾಗಿ 1,600 ಬಸ್ಸುಗಳನ್ನು ಖರೀದಿಸಲಾಗುತ್ತದೆ.

**ಮುಂಬೈ-ಬೆಂಗಳೂರು ಕಾರಿಡಾರ್ ಯೋಜನೆಗೆ ₹4 ಸಾವಿರ ಕೋಟಿ**

**ಬೆಂಗಳೂರು-ಮುಂಬೈ ಕಾರಿಡಾರ್:** ಬೆಂಗಳೂರು-ಮುಂಬೈ ಆರ್ಥಿಕ ಕಾರಿಡಾರ್ (ಬಿಎಂಇಸಿ) ಯೋಜನೆಗೆ ಉದ್ಧವ್ ಸರ್ಕಾರ 4 ಸಾವಿರ ಕೋಟಿ ರೂಪಾಯಿ ಘೋಷಿಸಿದೆ. ಸುಮಾರು 1 ಸಾವಿರ ಕಿ.ಮೀ ಉದ್ದದ ಈ ಕಾರಿಡಾರ್ ಚಿತ್ರದುರ್ಗ, ದಾವಣಗೆರೆ, ಹುಬ್ಬಳ್ಳಿ-ಧಾರವಾಡ, ಬೆಳಗಾವಿ, ಸೊಲ್ಲಾಪುರ, ಸಾಂಗ್ಲಿ, ಸತಾರಾ ಹಾಗೂ ಪುಣೆ ಸೇರಿ ಎರಡೂ ರಾಜ್ಯಗಳ ಪ್ರಮುಖ ನಗರಗಳನ್ನು ಹಾದುಹೋಗಲಿದೆ. ಇದರಿಂದ 3 ಲಕ್ಷ ಕೋಟಿ ರೂ. ಹೂಡಿಕೆಯಾಗುವ ನಿರೀಕ್ಷೆ ಇದ್ದು, ಸುಮಾರು 25 ಲಕ್ಷ ಉದ್ಯೋಗ ಸೃಷ್ಟಿಯಾಗಲಿವೆ.